**SEPTEMBER 14,2024**
**ALL INDIA RADIO- DHARWAD**
**PRADESH SAMACHARA (KANNADA) 7:00 AM**

<><><>

**ಆಕಾಶವಾಣಿ**

**ಪ್ರದೇಶ ಸಮಾಚಾರ**

**ಓದಿದವರು: ವಿವೇಕಾದಿತ್ಯ ಕನಿಯಾಲ**

<><><>

**ಮುಖ್ಯಾಂಶಗಳು:**

- **ಹಾಲಿನ ದರ ಏರಿಕೆ; ಹಾಲು ಮಹಾಮಂಡಳದ ರಾಜ್ಯಾಧ್ಯಕ್ಷರೊಂದಿಗೆ ಚರ್ಚೆ – ಮುಖ್ಯಮಂತ್ರಿ ಸಿದ್ದರಾಮಯ್ಯ.**
- **45 ಸಾವಿರ ಕೋಟಿ ರೂಪಾಯಿ ಮೌಲ್ಯದ, ರೈಲ್ವೆ ಯೋಜನೆಗಳು ರಾಜ್ಯದಲ್ಲಿ ಅನುಷ್ಠಾನ – ವಿ.ಸೋಮಣ್ಣ.**
- **ನಾಳೆ, ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ; ಬೀದರ್ ನಿಂದ ಚಾಮರಾಜನಗರದ ವರೆಗೆ, ಅಂತಿಮ ಹಂತದ ಸಿದ್ಧತೆ.**
- **ಹುಬ್ಬಳ್ಳಿಯಲ್ಲಿ ಇಂದಿನಿಂದ ಎರಡು ದಿನಗಳ, ರಾಜ್ಯ ಮಟ್ಟದ ರ್‍ಯಾಂಕಿಂಗ್ ರೋಲರ್ ಸ್ಕೇಟಿಂಗ್ ಕ್ರೀಡಾಕೂಟ.**

<><><>

**ಈಗ ವಾರ್ತೆಗಳ ವಿವರ**

<><><>

**ಹಾಲಿನ ದರ ಏರಿಕೆ ಸಂಬಂಧ, ಹಾಲು ಮಹಾಮಂಡಳದ ರಾಜ್ಯಾಧ್ಯಕ್ಷರೊಂದಿಗೆ ಚರ್ಚಿಸಿ, ನಿರ್ಧರಿಸಲಾಗುವುದು; ಏರಿಕೆ ಮೊತ್ತ ಹಾಲು ಉತ್ಪಾದಕರಿಗೆ ಸೇರಲಿದೆ ಎಂದು, ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ.**

**ರಾಮನಗರ ಜಿಲ್ಲೆ ಮಾಗಡಿಯಲ್ಲಿ, ಬೆಂಗಳೂರು ಹಾಲು ಒಕ್ಕೂಟದ ನೂತನ ಕಚೇರಿಯನ್ನು ಉದ್ಘಾಟಿಸಿ, ಮಾತನಾಡಿದರು.**

**ರಾಜ್ಯದ ಸರ್ವಾಂಗೀಣ ಅಭಿವೃದ್ಧಿ ಮತ್ತು ಎಲ್ಲ ಸಮುದಾಯಗಳ ಕಲ್ಯಾಣ ರಾಜ್ಯ ಸರ್ಕಾರದ ಸಂಕಲ್ಪ. ಪಂಚ ಖಾತ್ರಿ ಯೋಜನೆಗಳಿಗೆ, ಒಟ್ಟು 56 ಸಾವಿರ ಕೋಟಿ ರೂಪಾಯಿ ಮೀಸಲಿರಿಸಲಾಗಿದೆ. ಪರಿಶಿ ್ಟ ಸಮುದಾಯದ ಕಲ್ಯಾಣಕ್ಕೆ ಮೀಸಲಿಟ್ಟ ಹಣವನ್ನು, ಸಮರ್ಪಕವಾಗಿ ಬಳಕೆ ಮಾಡಲಾಗುವುದು ಎಂದು, ಮುಖ್ಯಮಂತ್ರಿ ಸ್ಪಷ್ಟ ಪಡಿಸಿದರು.**

<><><>

ರೈತರಿಗೆ 10 ಲಕ್ಷ ರೂಪಾಯಿ ವರೆಗೆ ಬೆಳೆ ಸಾಲ ನೀಡಲು, ಭಾರತೀಯ ರಿಸರ್ವ್ ಬ್ಯಾಂಕ್ ಮಾರ್ಗಸೂಚಿ ಇದೆ. ಬ್ಯಾಂಕರ್‌ಗಳು ಕಡ್ಡಾಯವಾಗಿ ಪಾಲಿಸಿ, ಸಕಾಲಿಕವಾಗಿ ಸಾಲ ಮಂಜೂರು ಮಾಡಬೇಕು ಎಂದು, ಕೇಂದ್ರ ಗ್ರಾಹಕ ವ್ಯವಹಾರಗಳು, ಆಹಾರ ಮತ್ತು ಸಾರ್ವಜನಿಕ ವಿತರಣೆ ಖಾತೆ ಸಚಿವ ಪ್ರಲ್ಹಾದ ಜೋಶಿ ಸೂಚಿಸಿದ್ದಾರೆ.

ಧಾರವಾಡ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ, ಜಿಲ್ಲಾ ಮಟ್ಟದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ, ಅವರು ಮಾತನಾಡಿದರು.

ಕೇಂದ್ರ ಸರ್ಕಾರ ಪುರಸ್ಕೃತ ಸಮುದಾಯ ಮತ್ತು ವ್ಯಕ್ತಿಗತ ಯೋಜನೆಗಳನ್ನು ಸರಿಯಾಗಿ ಅನು ಾನಗೊಳಿಸಬೇಕು. ಕೇಂದ್ರ ಸ್ವಯಂ ಉದ್ಯೋಗಕ್ಕೆ ಆದ್ಯತೆ ನೀಡುತ್ತಿದೆ. ಬ್ಯಾಂಕ್‌ಗಳು ನಿಗದಿತ ಗುರಿಗೆ ಅನುಗುಣವಾಗಿ, ಸಾಲ ಬಿಡುಗಡೆ ಮಾಡಬೇಕು. ಕಾಲಮಿತಿಯಲ್ಲಿ ಪ್ರಗತಿ ಸಾಧಿಸಬೇಕೆಂದು, ಸಚಿವ ಜೋಶಿ ತಿಳಿಸಿದರು.

<><><>

ರಾಜ್ಯದಲ್ಲಿ 45 ಸಾವಿರ ಕೋಟಿ ರೂಪಾಯಿ ಮೌಲ್ಯದ, ರೈಲ್ವೆ ಯೋಜನೆಗಳು ಅನುಷ್ಠಾನಗೊಳ್ಳಲಿವೆ ಎಂದು, ಕೇಂದ್ರದ ರೈಲ್ವೆ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ ತಿಳಿಸಿದ್ದಾರೆ.

ಮೈಸೂರಿನ ಅಶೋಕಪುರಂ ಹಾಗೂ ನಗರ ರೈಲ್ವೆ ಕಾರ್ಯಾಗಾರಕ್ಕೆ ಭೇಟಿ ನೀಡಿ, ಕಾಮಗಾರಿಗಳನ್ನು ಸಚಿವರು ಪರಿಶೀಲಿಸಿದರು.

ಮೈಸೂರು ವಿಭಾಗದ ಹಿರಿಯ ರೈಲ್ವೆ ಅಧಿಕಾರಿಗಳ ಸಭೆ ನಡೆಸಿ, ಬಳಿಕ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರೈಲ್ವೆ ಇಲಾಖೆ ಪ್ರತಿಯೊಂದು ವಿಭಾಗಕ್ಕೂ 7 ಸಾವಿರದ 560 ಕೋಟಿ ರೂಪಾಯಿ ಅನುದಾನ ನೀಡಲಾಗಿದೆ ಎಂದರು.

440 ಕೋಟಿ ರೂಪಾಯಿ ವೆಚ್ಚದಲ್ಲಿ, ಸರ್ಕ್ಯೂಟ್ ರೈಲುಗಳ ವ್ಯವಸ್ಥೆ ರೂಪಿಸಿ, ಸರಕು ಸಾಗಣೆಗೆ ಆದ್ಯತೆ ನೀಡಲಾಗುತ್ತಿದೆ. ಲಾರಿಗಳ ಸಂಚಾರ ದಟ್ಟಣೆ ಹಾಗೂ ವಾಯು ಮಾಲಿನ್ಯ ತಡೆಗಟ್ಟಲು ಸಾಧ್ಯವಾಗಲಿದೆ ಎಂದು, ಸಚಿವ ಸೋಮಣ್ಣ ನುಡಿದರು.

<><><>

ಬೆಳಗಾವಿ ವಿಮಾನ ನಿಲ್ದಾಣವನ್ನು, ಅಂತಾರಾಷ್ಟ್ರೀಯ ಮಟ್ಟಕ್ಕೆ ಮೇಲ್ದರ್ಜೆಗೇರಿಸಲು, ವಿಮಾನ ನಿಲ್ದಾಣ ಪ್ರಾಧಿಕಾರದ ಅಧಿಕಾರಿಗಳೊಂದಿಗೆ ಸಮಾಲೋಚನೆ ನಡೆಸಿದ್ದಾಗಿ, ಬೆಳಗಾವಿ ಸಂಸದ ಜಗದೀಶ್ ಶೆಟ್ಟರ್ ತಿಳಿಸಿದ್ದಾರೆ.

ಬೆಳಗಾವಿಯಲ್ಲಿ ಇಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, 14 ಎಕರೆ ಹೆಚ್ಚುವರಿ ಭೂಮಿಯನ್ನು, ವಿಮಾನ ನಿಲ್ದಾಣಕ್ಕಾಗಿ ಸ್ವಾಧೀನ ಪಡಿಸಿಕೊಳ್ಳಲಾಗಿದೆ. ಬೆಳಗಾವಿ, ಧಾರವಾಡ ಮಧ್ಯೆ ರೈಲ್ವೆ ಮಾರ್ಗ ನಿರ್ಮಾಣ ಕಾಮಗಾರಿ ಆರಂಭಿಸಲು ಸೂಚಿಸಲಾಗಿದೆ. ಪುಣೆ – ಬೆಳಗಾವಿ ಮಧ್ಯೆ ವಂದೇ ಭಾರತ್ ರೈಲು ಸಂಚಾರ ಇದೇ ದಿನಾಂಕ 16 ರಂದು ಆರಂಭಗೊಳ್ಳಲಿದ್ದು, ಪ್ರಧಾನಮಂತ್ರಿ ನರೇಂದ್ರ ಮೋದಿ ಚಾಲನೆ ನೀಡಲಿದ್ದಾರೆ ಎಂದರು.

<><><>

ಇಂದಿನಿಂದ ಅಕ್ಟೋಬರ್ 1 ನೇಯ ತಾರೀಖಿನ ವರೆಗೆ, ಚಿಕ್ಕಬಳ್ಳಾಪುರ ಜಿಲ್ಲೆಯ ನಗರ ಮತ್ತು ಗ್ರಾಮೀಣ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ, 'ಸ್ವಚ್ಛತೆಯೇ ಸೇವೆ' ಕಾರ್ಯಕ್ರಮ ಜರುಗಲಿದೆ.

ಸ್ವಚ್ಛತಾ ಹಿ ಸೇವಾ.. ಅಭಿಯಾನದಡಿ, 'ಒಂದು ಗಿಡ, ತಾಯಿಯ ಹೆಸರಲ್ಲಿ' ಕಾರ್ಯಕ್ರಮ ಆಯೋಜಿತವಾಗಿದೆ. ಪ್ರತಿಯೊಬ್ಬರೂ ಗಿಡ ನೆಟ್ಟು ಪೋಷಿಸುವ ಸಂಕಲ್ಪ ಮಾಡಲಿದ್ದಾರೆ ಎಂದು, ಜಿಲ್ಲಾಧಿಕಾರಿ ಪಿ.ಎನ್.ರವೀಂದ್ರ ತಿಳಿಸಿದ್ದಾರೆ.

ಪೌರ ಕಾರ್ಮಿಕರು ಹಾಗೂ ಸಫಾಯಿ ಕರ್ಮಚಾರಿಗಳ ಆರೋಗ್ಯ ತಪಾಸಣೆ ಶಿಬಿರ ನಡೆಯಲಿದ್ದು, ಅಕ್ಟೋಬರ್ 2 ಗಾಂಧಿ ಜಯಂತಿ ದಿನದಂದು, 'ಸ್ವಚ್ಛತಾ ದಿವಸ್' ಆಯೋಜಿತವಾಗಿದೆ ಎಂದರು.

<><><>

ಮಂಡ್ಯ ಜಿಲ್ಲೆ, ಮಳವಳ್ಳಿ ತಾಲೂಕಿನ ಶಿವನ ಸಮುದ್ರದಲ್ಲಿ, ಇಂದಿನಿಂದ ಎರಡು ದಿನಗಳ ಕಾಲ, ಗಗನಚುಕ್ಕಿ ಜಲಪಾತೋತ್ಸವ ನಡೆಯಲಿದೆ.

ಇಂದು ಸಂಜೆ ಆರು ಗಂಟೆಗೆ, ಮುಖ್ಯಮಂತ್ರಿ ಸಿದ್ದರಾಮಯ್ಯ ಜಲಪಾತೋತ್ಸವಕ್ಕೆ ಚಾಲನೆ ನೀಡಲಿದ್ದಾರೆ.

ಶನಿವಾರ ಮತ್ತು ಭಾನುವಾರ ಬೆಳಗ್ಗೆ 11 ಗಂಟೆಯಿಂದ ರಾತ್ರಿ 11 ಗಂಟೆಯ ವರೆಗೆ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಲಿವೆ. ರಾತ್ರಿ ವೇಳೆ ಲೇಸರ್ ಶೋ ವ್ಯವಸ್ಥೆ ಮಾಡಲಾಗಿದೆ ಎಂದು, ಶಾಸಕ ಪಿ.ಎಂ.ನರೇಂದ್ರಸ್ವಾಮಿ ತಿಳಿಸಿದ್ದಾರೆ.

<><><>

ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ..

<><><>

ರಾಷ್ಟ್ರ ಭಾಷೆ 'ಹಿಂದಿ ದಿವಸ್ ಅನ್ನು', ಇಂದು ರಾಷ್ಟ್ರಾದ್ಯಂತ ಆಚರಿಸಲಾಗುತ್ತಿದೆ.

ಸೆಪ್ಟೆಂಬರ್ 14, 1949, ಭಾರತದ ಸಂವಿಧಾನ ಸಭೆ, ದೇವನಾಗರಿ ಲಿಪಿಯಲ್ಲಿ ಬರೆದ ಹಿಂದಿಯನ್ನು, ಭಾರತ ಗಣರಾಜ್ಯದ ಅಧಿಕೃತ ಭಾ ೆಯಾಗಿ ಅಳವಡಿಸಿಕೊಂಡಿತು.

ಗಣ್ಯರು ರಾಷ್ಟ್ರ ಭಾಷಾ ದಿನದ ಶುಭಾಶಯ ಕೋರಿದ್ದಾರೆ. ಈ ಬೆಳಗ್ಗೆ 7 ಗಂಟೆ 10 ನಿಮಿಷಕ್ಕೆ, ಗೃಹ ಖಾತೆ ಸಚಿವ ಅಮಿತ್ ಶಾ 'ಹಿಂದಿ ದಿವಸ್' ಸಂದೇಶವನ್ನು ನೀಡಲಿದ್ದಾರೆ. ಆಕಾಶವಾಣಿ ಹಾಗೂ ದೂರದರ್ಶನದ ಎಲ್ಲ ವಾಹಿನಿಗಳು, ಈ ಸಂದೇಶವನ್ನು ಪ್ರಸಾರ ಮಾಡಲಿವೆ.

<><><>

ನಾಲ್ಕನೇಯ ಅಖಿಲ ಭಾರತೀಯ, 'ರಾಜಭಾ ಾ ಸಮ್ಮೇಳನ', ಇಂದು ದಿಲ್ಲಿಯ ಭಾರತ ಮಂಟಪದಲ್ಲಿ ನಡೆಯಲಿದೆ.

ಗೃಹ ಖಾತೆ ಸಚಿವ ಅಮಿತ್ ಶಾ ಸಮ್ಮೇಳನವನ್ನು ಉದ್ದೇಶಿಸಿ ಮಾತನಾಡಲಿದ್ದಾರೆ. ಭಾರತೀಯ ಭಾ ಾ ವಿಭಾಗಕ್ಕೆ ಅವರು ಚಾಲನೆ ನೀಡಿ, ಹಲವು ಕೃತಿಗಳನ್ನು ಬಿಡುಗಡೆ ಮಾಡಲಿದ್ದಾರೆ.

<><><>

'ನಾಗರಿಕ ಸಹಭಾಗಿತ್ವ ಮತ್ತು ಆಡಳಿತದಲ್ಲಿ, ಕೃತಕ ಬುದ್ಧಿಮತ್ತೆಯ ಮಾರ್ಗ' ಎಂಬ ಧ್ಯೇಯದಡಿ, ನಾಳೆ, 15ನೇಯ ತಾರೀಖು, ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನವನ್ನು ಆಚರಿಸಲಾಗುತ್ತಿದೆ. ಬೀದರ್ ನಿಂದ ಚಾಮರಾಜ ನಗರದ ವರೆಗೆ, ಎರಡೂವರೆ ಸಾವಿರ ಕಿಲೋ ಮೀಟರ್ ಉದ್ದದ ಮಾನವ ಸರಪಳಿ ನಿರ್ಮಿಸಿ, ಸಂವಿಧಾನ ಪೀಠಿಕೆ ಓದುವ ಯೋಜನೆ ರಾಜ್ಯ ಸರ್ಕಾರ ರೂಪಿಸಿದೆ. ಅಕ್ಷರ ಸಂತ ಪದ್ಮಶ್ರೀ ಪುರಸ್ಕೃತ ಮಂಗಳೂರಿನ ಹರೇಕಳ ಹಾಜಬ್ಬ ಈ ಅಭಿಯಾನದ ರಾಯಭಾರಿಯಾಗಿದ್ದಾರೆ.

ಮಾನವ ಸರಪಳಿಯಲ್ಲಿ ಭಾಗವಹಿಸುವ ಪ್ರತಿಯೊಬ್ಬರಿಗೂ, ರಾಜ್ಯ ಸರ್ಕಾರ 'ಪ್ರಶಂಸಾಪತ್ರ' ನೀಡಲಿದೆ. www.democracy'day'karnataka.in ನಲ್ಲಿ, ಹೆಸರು ನೋಂದಾಯಿಸಲು, ಕೋರಲಾಗಿದೆ.

ನಾಳೆ, ಚಿತ್ರದುರ್ಗ ಜಿಲ್ಲೆಯಲ್ಲಿ ರಾಜ್ಯದಲ್ಲಿಯೇ ಅತೀ ಉದ್ದದ, 145 ಕಿಲೋ ಮೀಟರ್ ಮಾನವ ಸರಪಳಿಯನ್ನು ಒಂದೂವರೆ ಲಕ್ಷ ಜನ ಪಾಲ್ಗೊಂಡು, ನಿರ್ಮಿಸಲಿದ್ದಾರೆ ಎಂದು, ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಹೇಳಿದ್ದಾರೆ.

ಹಾಸನ ಜಿಲ್ಲೆ ಅರಕಲಗೂಡು ತಾಲೂಕಿನ, ಕಡುವಿನ ಹೊಸಹಳ್ಳಿ ಗ್ರಾಮದಿಂದ, ಬೇಲೂರು ತಾಲೂಕು ಚನ್ನಾಪುರ ಗಡಿ–ಕೈಮರದ ವರೆಗೆ, 111 ಕಿಲೋ ಮೀಟರ್ ಮಾನವ ಸರಪಳಿ ನಿರ್ಮಿಸಲಾಗುತ್ತಿದೆ ಎಂದು, ಅಪರ ಜಿಲ್ಲಾಧಿಕಾರಿ ಕೆ.ಟಿ ಶಾಂತಲಾ ತಿಳಿಸಿದ್ದಾರೆ.

ಶಿವಮೊಗ್ಗ ಜಿಲ್ಲೆಯಲ್ಲಿ, 60 ಕಿಲೋ ಮೀಟರ್ ಉದ್ದದ ಮಾನವ ಸರಪಳಿ ನಿರ್ಮಿಸಲಾಗುತ್ತಿದ್ದು, ಶಿವಮೊಗ್ಗ ಹಾಗೂ ಭದ್ರಾವತಿ ತಾಲೂಕಿನ ಒಂದು ಲಕ್ಷ ಜನ ಪಾಲ್ಗೊಳ್ಳುವ ನಿರೀಕ್ಷೆ ಇದೆ ಎಂದು, ಜಿಲ್ಲಾಧಿಕಾರಿ ಗುರುದತ್ತ ಹೆಗಡೆ ಮಾಹಿತಿ ನೀಡಿದ್ದಾರೆ.

<><><>

ಬೆಳಗಾವಿ ಜಿಲ್ಲಾ ವ್ಯಾಪ್ತಿಯ ತೇಗೂರ ಗ್ರಾಮದಿಂದ, ಉತ್ತರಕನ್ನಡ ಜಿಲ್ಲೆಯ ಗಡಿ ಭಾಗ, ಮಾವಿನಕೊಪ್ಪ ಗ್ರಾಮದ ವರೆಗೆ, ಧಾರವಾಡ ಜಿಲ್ಲೆಯಲ್ಲಿ 55 ಕಿಲೋ ಮೀಟರ್ ಉದ್ದದ ಮಾನವ ಸರಪಳಿ ನಿರ್ಮಿಸಿ, ಪ್ರಜಾಪ್ರಭುತ್ವ ದಿನಾಚರಣೆಗೆ ಪೂರ್ವ ಸಿದ್ಧತೆ ಕೈಗೊಳ್ಳಲಾಗಿದೆ ಎಂದು, ಜಿಲ್ಲಾಧಿಕಾರಿ ದಿವ್ಯಾ ಪ್ರಭು ತಿಳಿಸಿದ್ದಾರೆ.

ಅರಣ್ಯ ಇಲಾಖೆಯ ಸಾಮಾಜಿಕ ಅರಣ್ಯೀಕರಣ ಯೋಜನೆ ಅಡಿ, 4 ಸಾವಿರ ಸಸಿಗಳನ್ನು ನೆಡುವ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು, ಅವರು ಪ್ರದೇಶ ಸಮಾಚಾರಕ್ಕಾಗಿ, ಹೆಚ್ಚಿನ ಮಾಹಿತಿ ನೀಡಿದ್ದಾರೆ.

<><><>

ಜಿಲ್ಲಾಧಿಕಾರಿ ದಿವ್ಯಾ ಪ್ರಭು ಧ್ವನಿ 45 ಸೆಕೆಂದುಗಳು

<><><>

ಹುಬ್ಬಳ್ಳಿಯಲ್ಲಿ ಮೊದಲ ಬಾರಿಗೆ, ರಾಜ್ಯ ಮಟ್ಟದ ನಾಲ್ಕನೇ ರ್‍ಯಾಂಕಿಂಗ್ ರೋಲರ್ ಸ್ಕೇಟಿಂಗ್ ಕ್ರೀಡಾಕೂಟ, ಇಂದಿನಿಂದ ಎರಡು ದಿನಗಳ ಕಾಲ, ಆಯೋಜಿತವಾಗಿದೆ.

ರಾಷ್ಟ್ರ ಹಾಗೂ ರಾಜ್ಯ ಮಟ್ಟದ 450 ಸ್ಕೇಟಿಂಗ್ ಪಟುಗಳು ಭಾಗವಹಿಸಲಿದ್ದಾರೆ.

ಧಾರವಾಡ ಜಿಲ್ಲಾ ರೋಲರ್ ಸ್ಕೇಟಿಂಗ್ ಅಸೋಸಿಯೇಶನ್ ಕಾರ್ಯದರ್ಶಿ ಈರಣ್ಣ ಕಾಡಪ್ಪನವರ, ಪ್ರದೇಶ ಸಮಾಚಾರಕ್ಕಾಗಿ ಮಾಹಿತಿ ನೀಡಿದ್ದಾರೆ.

<><><>

ಈರಣ್ಣ ಕಾಡಪ್ಪನವರ ಧ್ವನಿ 41 ಸೆಕೆಂದುಗಳು

<><><>

ಕರ್ನಾಟಕ ಸಂಗೀತ ನೃತ್ಯ ಅಕಾದೆಮಿಯ, ಕರ್ನಾಟಕ ಕಲಾಶ್ರೀ ಪ್ರಶಸ್ತಿಗೆ, ಖ್ಯಾತ ಹಿಂದೂಸ್ಥಾನಿ ಗಾಯಕ ಬಳ್ಳಾರಿಯ ಡಿ. ಕುಮಾರದಾಸ ಹಾಗೂ ಸುಗಮ ಸಂಗೀತ ಗಾಯಕ ರಾಯಚೂರಿನ , ಅಂಬಯ್ಯ ನುಲಿ ಭಾಜನರಾಗಿದ್ದಾರೆ.

ಅಕಾದೆಮಿ ಅಧ್ಯಕ್ಷೆ ಶುಭಾ ಧನಂಜಯ ಅಧ್ಯಕ್ಷತೆಯ ಸಮಿತಿ, ಬೆಂಗಳೂರಿನಲ್ಲಿ ಈ ಪುರಸ್ಕಾರಗಳನ್ನು ಪ್ರಕಟಿಸಿದೆ.

ವಾರ್ಷಿಕ ಪ್ರಶಸ್ತಿ ವಿಭಾಗದಲ್ಲಿ ಪದ್ಮಾ ಗುರುದತ್, ರೇವತಿ ಕಾಮತ್, ವಿ.ರಮೇಶ್, ಕದ್ರಿ ರಮೇಶ ನಾಥ್, ವಿರೂಪಾಕ್ಷ ರೆಡ್ಡಿ ಓಣಿಮನಿ, ಶಫಿ ಖಾನ್ ಹಾಗೂ ಸತೀಶ್ ಹಂಪಿಹೊಳಿ ಆಯ್ಕೆಯಾಗಿದ್ದಾರೆ.

ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು:

- ಹಾಲಿನ ದರ ಏರಿಕೆ; ಹಾಲು ಮಹಾಮಂಡಳದ ರಾಜ್ಯಾಧ್ಯಕ್ಷರೊಂದಿಗೆ ಚರ್ಚೆ – ಮುಖ್ಯಮಂತ್ರಿ ಸಿದ್ದರಾಮಯ್ಯ.
- 45 ಸಾವಿರ ಕೋಟಿ ರೂಪಾಯಿ ಮೌಲ್ಯದ, ರೈಲ್ವೆ ಯೋಜನೆಗಳು ರಾಜ್ಯದಲ್ಲಿ ಅನುಷ್ಠಾನ – ವಿ.ಸೋಮಣ್ಣ.
- ನಾಳೆ, ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ; ಬೀದರ್ ನಿಂದ ಚಾಮರಾಜನಗರದ ವರೆಗೆ, ಅಂತಿಮ ಹಂತದ ಸಿದ್ಧತೆ.
- ಹುಬ್ಬಳ್ಳಿಯಲ್ಲಿ ಇಂದಿನಿಂದ ಎರಡು ದಿನಗಳ, ರಾಜ್ಯ ಮಟ್ಟದ ರ್‍ಯಾಂಕಿಂಗ್ ರೋಲರ್ ಸ್ಕೇಟಿಂಗ್ ಕ್ರೀಡಾಕೂಟ.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

<><><>

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ, ಈ ಬೆಳಗ್ಗೆ 7 ಗಂಟೆ 35 ನಿಮಿಷಕ್ಕೆ.

<><><>